**All India Radio: Bangalore**
**National Bulletin In Kannada**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**03.05.2026 19.35 p.m.**
****************

ಮುಖ್ಯಾಂಶಗಳು

೧. ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆ ಹಾಗೂ ೮ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಮತ ಎಣಿಕೆ ನಾಳೆ; ಸಕಲ ಸಿದ್ಧತೆ, ಬಿಗಿ ಬಂದೋಬಸ್ತ್

೨. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದಿಂದ ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮದ ಮಾರ್ಗಸೂಚಿ ಬಿಡುಗಡೆ

೩. ಆರೋಗ್ಯ ಭದ್ರತೆಗೆ ಕೇಂದ್ರ ಸರ್ಕಾರದ ಆದ್ಯತೆ - ಕೇಂದ್ರ ಸಚಿವ ಡಾ.ಮನ್ಸುಖ್ ಮಾಂಡವಿಯ

೪. ಹೈದರಾಬಾದ್ ನಲ್ಲಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಎದುರು ಕೋಲ್ಕತ್ತಾ ನೈಟ್ ರೈಡರ್ಸ್ ೭ ವಿಕೆಟ್ ಗಳ ಜಯ

---

ನಾಲ್ಕು ರಾಜ್ಯಗಳು, ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆ ಹಾಗೂ ಆರು ರಾಜ್ಯಗಳ ಎಂಟು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಮತ ಎಣಿಕೆ ನಾಳೆ ನಡೆಯಲಿದೆ. ಮತ ಎಣಿಕೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಮತದಾನ ನಡೆದಿರುವ ಕ್ಷೇತ್ರಗಳಲ್ಲಿ ಸುಗಮ ಎಣಿಕೆ ಖಚಿತಪಡಿಸಿಕೊಳ್ಳಲು ಸಕಲ ವ್ಯವಸ್ಥೆ ಮಾಡಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಸ್ಟ್ರಾಂಗ್ ರೂಮ್‌ಗಳ ಸುತ್ತಲೂ, ಎಣಿಕೆ ಕೇಂದ್ರಗಳಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಭದ್ರತೆಯನ್ನು ಬಲಪಡಿಸಲಾಗಿದೆ.

ಎಲ್ಲಾ ಎಣಿಕೆ ಕೇಂದ್ರಗಳಲ್ಲಿ ಮೇಲ್ವಿಚಾರಣೆಗಾಗಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇವಿಎಂಗಳು ಮತ್ತು ವಿವಿಪಿಎಟಿಗಳನ್ನು ಸ್ಟ್ರಾಂಗ್ ರೂಮ್‌ಗಳಿಂದ ಎಣಿಕೆ ಕೇಂದ್ರಗಳಿಗೆ ಸಂಪೂರ್ಣ

ಭದ್ರತೆಯೊಂದಿಗೆ ಸ್ಥಳಾಂತರಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ತಡೆಗಟ್ಟಲು ಎಣಿಕೆ ಕೇಂದ್ರಗಳ ಸುತ್ತಮುತ್ತ ಸಂಚಾರ ನಿರ್ಬಂಧಿಸಲಾಗಿದೆ.

ಅಧಿಕಾರಿಗಳು ನಾಳೆ ಬೆಳಿಗ್ಗೆ ೬ ಗಂಟೆಯೊಳಗೆ ಎಣಿಕೆ ಕೇಂದ್ರಗಳನ್ನು ತಲುಪಲಿದ್ದು, ಎಣಿಕೆ ಏಜೆಂಟ್‌ಗಳು ಎಣಿಕೆ ಪ್ರಾರಂಭವಾಗುವ ಕನಿಷ್ಠ ಒಂದು ಗಂಟೆ ಮೊದಲು ವರದಿ ಮಾಡಿಕೊಳ್ಳಲು ಸೂಚಿಸಲಾಗಿದೆ. ಚುನಾವಣಾ ಅಧಿಕಾರಿಗಳು ಸೇರಿದಂತೆ ಎಲ್ಲಾ ಸಿಬ್ಬಂದಿಗೆ ಹೊಸದಾಗಿ ಪರಿಚಯಿಸಲಾದ ಕ್ಯುಆರ್ ಕೋಡೆಡ್ ಫೋಟೋ ಗುರುತಿನ ಚೀಟಿಗಳನ್ನು ಕಡ್ಡಾಯಗೊಳಿಸಲಾಗಿದೆ ಮತ್ತು ಎಣಿಕೆ ಕೇಂದ್ರಗಳಿಗೆ ಪ್ರವೇಶಿಸಲು ಮೂರು ಹಂತಗಳ ಭದ್ರತಾ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ.

ಪಶ್ಚಿಮ ಬಂಗಾಳದಲ್ಲಿ ಫಾಲ್ಟಾ ವಿಧಾನಸಭಾ ಕ್ಷೇತ್ರದ ಚುನಾವಣೆಯನ್ನು ಅಸಿಂಧು ಎಂದು ಭಾರತ ಚುನಾವಣಾ ಆಯೋಗ ಘೋಷಿಸಿದೆ. ಫಾಲ್ಟಾ ವಿಧಾನಸಭೆಗೆ ಮೇ ೨೧ ರಂದು ಮರು ಮತದಾನ ನಡೆಯಲಿದ್ದು, ಎಣಿಕೆ ಮೇ ೨೪ ರಂದು ನಡೆಯಲಿದೆ.

---

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಇತ್ತೀಚೆಗೆ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮ ೨.೦ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ. ಜನನ ದೋಷಗಳು, ರೋಗಗಳು, ಕೊರತೆಗಳು ಮತ್ತು ಬೆಳವಣಿಗೆಯ ವಿಳಂಬಗಳಿಗೆ ಚೌಕಟ್ಟನ್ನು ಇದು ವಿಸ್ತರಿಸಿದೆ.

ಅಂಟುರೋಗವಲ್ಲದ ಕಾಯಿಲೆಗಳು, ಮಾನಸಿಕ ಆರೋಗ್ಯ ಸ್ಥಿತಿ ಮತ್ತು ನಡವಳಿಕೆ ಸಮಸ್ಯೆಗಳು ಸೇರಿದಂತೆ ಹೊಸ ಯುಗದ ಆರೋಗ್ಯ ಸವಾಲುಗಳನ್ನು ಸಹ ಈ ಚೌಕಟ್ಟು ಒಳಗೊಂಡಿದೆ. ಹೊಸ ಮಾರ್ಗಸೂಚಿಯು ಈಗ ಹೆಚ್ಚು ಸಮಗ್ರ, ಜೀವನಚಕ್ರ ಆಧಾರಿತ ವಿಧಾನದೊಂದಿಗೆ ಜನನದಿಂದ ೧೮ ವರ್ಷಗಳವರೆಗಿನ ಮಕ್ಕಳ ಆರೋಗ್ಯದ ಮೇಲೆ ಕೇಂದ್ರೀಕರಿಸುತ್ತದೆ. ಇದು ಮಗುವಿನ ಬೆಳವಣಿಗೆಯ ಪ್ರತಿಯೊಂದು ಹಂತದಲ್ಲೂ ನಿರಂತರ ಆರೈಕೆಗೆ ಒತ್ತು ನೀಡಲಿದೆ.

ಮಕ್ಕಳು ಸರಿಯಾದ ಆರೈಕೆಯನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಸದೃಢ ವ್ಯವಸ್ಥೆ ಹಾಗೂ ವ್ಯಾಪಕ ಸ್ಕ್ರೀನಿಂಗ್ ಕಾರ್ಯಕ್ರಮ ಮತ್ತು ಡಿಜಿಟಲ್ ಆರೋಗ್ಯ ಕಾರ್ಡ್‌ಗಳ ಪರಿಚಯ ಮೊದಲಾದ ಕ್ರಮ ಕೈಗೊಳ್ಳಲಾಗಿದೆ. ಈ ಕಾರ್ಯಕ್ರಮವು ನೈಜ-ಸಮಯದ ದತ್ತಾಂಶ ಜಾಡು, ಸಂಯೋಜಿತ ವೇದಿಕೆಗಳ ಉತ್ತಮ ಬಳಕೆ ಮತ್ತು ಬಹು-ವಲಯ ಸಮ್ಮಿಲನದ ಮೇಲೆ ಕೇಂದ್ರೀಕರಿಸುತ್ತದೆ.

ಈ ಮಾರ್ಗಸೂಚಿಗಳ ಬಿಡುಗಡೆಯು, ಪ್ರತಿ ಮಗುವಿಗೆ ಸಮಾನ ಮತ್ತು ಗುಣಮಟ್ಟದ ಆರೋಗ್ಯ ಸೇವೆಗಳನ್ನು ಖಾತರಿಪಡಿಸಿಕೊಳ್ಳುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ.

---

ನವದೆಹಲಿಯಲ್ಲಿ ನಾಳೆಯಿಂದ ಪಂಚಾಯತ್ ಅಭಿವೃದ್ಧಿ ಯೋಜನೆಗಳ ತಯಾರಿಕೆಯ ಕುರಿತು ಎರಡ ದಿನಗಳ ರಾಷ್ಟ್ರೀಯ ಕಾರ್ಯಾಗಾರವನ್ನು ಪಂಚಾಯತ್ ರಾಜ್ ಸಚಿವಾಲಯ ಆಯೋಜಿಸಿದೆ.

ಎರಡು ದಿನಗಳ ಈ ಕಾರ್ಯಾಗಾರವು ದತ್ತಾಂಶ ಆಧಾರಿತ, ಭಾಗವಹಿಸುವಿಕಾತ್ಮಕ ಯೋಜನೆಯನ್ನು ತಳಮಟ್ಟದಲ್ಲಿ ಬಲಪಡಿಸುವ ಗುರಿಯನ್ನು ಹೊಂದಿದೆ. ೨೦೨೬-೨೭ನೇ ಸಾಲಿನ ಪಂಚಾಯತ್ ಅಭಿವೃದ್ಧಿ ಯೋಜನೆಗಳು ಹದಿನಾರನೇ ಹಣಕಾಸು ಆಯೋಗದ ಷರತ್ತುಗಳು ಮತ್ತು ಗ್ರಾಮೀಣ ಸಮುದಾಯಗಳಿಗೆ ಮಾಪನ ಸಾಧ್ಯ ಫಲಿತಾಂಶಗಳೊಂದಿಗೆ ಹೊಂದಿಕೆಯಾಗುವುದನ್ನು ಕಾರ್ಯಾಗಾರ ಖಚಿತಪಡಿಸಲಿದೆ ಎಂದು ಸಚಿವಾಲಯ ತಿಳಿಸಿದೆ.

ಪಂಚಾಯತ್ ರಾಜ್ ಸಚಿವಾಲಯದ ಕಾರ್ಯದರ್ಶಿ ವಿವೇಕ್ ಭಾರದ್ವಾಜ್ ಮತ್ತು ಇತರ ಅಧಿಕಾರಿಗಳ ಸಮ್ಮುಖದಲ್ಲಿ ಕಾರ್ಯಾಗಾರ ಉದ್ಘಾಟನೆಯಾಗಲಿದೆ.

ಎರಡು ದಿನಗಳ ಕಾರ್ಯಾಗಾರದಲ್ಲಿ ತಾಂತ್ರಿಕ ಕಾರ್ಯಕ್ರಮ ಮತ್ತು ಪ್ರಾಯೋಗಿಕ ಗುಂಪು ಅಭ್ಯಾಸಗಳಿರಲಿವೆ. ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ತಂಡಗಳು ಜೀವನೋಪಾಯ, ಆರೋಗ್ಯ, ಮಕ್ಕಳ ಸ್ನೇಹಿ ಆಡಳಿತ ಮತ್ತು ಇತರ ಹತ್ತು ವಿಷಯಾಧಾರಿತ ಕ್ಷೇತ್ರಗಳಲ್ಲಿ ಪರಿಷ್ಕರಿಸಿದ ಪೋರ್ಟಲ್‌ನಲ್ಲಿ ಮಾದರಿ ಯೋಜನೆಗಳನ್ನು ಸಿದ್ಧಪಡಿಸಲಿವೆ ಎಂದು ಸಚಿವಾಲಯ ತಿಳಿಸಿದೆ.

---

ಈ ವರ್ಷಾಂತ್ಯದ ವೇಳೆಗೆ ಆಧಾರ್‌ನ ನೋಟವು ಕೇವಲ ಫೋಟೋ ಮತ್ತು ಕ್ಯೂಆರ್ ಕೋಡ್‌ಗೆ ಬದಲಾಗಬಹುದು ಎಂಬ ಸಾಮಾಜಿಕ ಮಾಧ್ಯಮ ಪೋಸ್ಟ್ ನ ಮಾಹಿತಿ ಸತ್ಯಕ್ಕೆ ದೂರ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಇಂದು ತಿಳಿಸಿದೆ.

ಅಂತಹ ಯಾವುದೇ ಬದಲಾವಣೆಯ ಪ್ರಸ್ತಾಪ ಇಲ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

---

ಕಾರ್ಮಿಕರ ಹಿತಾಸಕ್ತಿ ಕಾಪಾಡಲು ಕೇಂದ್ರ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ದೇಶದ ೧೫ ಕೋಟಿ ಜನರಿಗೆ ಇಎಸ್‌ಐಸಿ ಸಾಮಾಜಿಕ ಭದ್ರತೆ ನೀಡಲಾಗುತ್ತಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ೧೦೦ ಹಾಸಿಗೆ ಸಾಮರ್ಥ್ಯದ ಇಎಸ್‌ಐಸಿ ಆಸ್ಪತ್ರೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಆರೋಗ್ಯ ಭದ್ರತೆಯು ಸಾಮಾಜಿಕ ಭದ್ರತೆಯ ಪ್ರಮುಖ ಭಾಗವಾಗಿದೆ ಎಂದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ೧೦  ವರ್ಷಗಳಲ್ಲಿ ಈ ಹಿಂದೆ ೭ ಕೋಟಿ ಜನರಿಗೆ ಮಾತ್ರ ಲಭ್ಯವಿದ್ದ ಇಎಸ್‌ಐಸಿ ಸೌಲಭ್ಯವನ್ನು ಈಗ ೧೫ ಕೋಟಿ ಜನರಿಗೆ ನೀಡಿದೆ. ೪೦ ವರ್ಷ ಮೇಲ್ಪಟ್ಟ ಕಾರ್ಮಿಕರಿಗೆ ಆರೋಗ್ಯ ತಪಾಸಣಾ ಶಿಬಿರ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಧ್ವನಿ - ಮನ್ಸುಖ್ ಮಾಂಡವೀಯ

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಇಎಸ್‌ಐಸಿ ಆಸ್ಪತ್ರೆ ಇಂದು ಕೇಂದ್ರ ಸರ್ಕಾರದ ಸಹಕಾರದಿಂದ ಉದ್ಘಾಟನೆಯಾಗಿದೆ. ಇಎಸ್‌ಐಸಿ ಆಸ್ಪತ್ರೆಯಲ್ಲಿ ಎಲ್ಲಾ ರೀತಿಯ ಚಿಕಿತ್ಸೆ ದೊರೆಯುವಂತೆ ಕ್ರಮ ವಹಿಸಲಾಗುತ್ತಿದ್ದು, ಹೆಚ್ಚಿನ ಚಿಕಿತ್ಸೆಗೆ ಬೇರೆ ಆಸ್ಪತ್ರೆಗೆ ಶಿಫಾರಸ್ಸು ಮಾಡಿದರೆ ಚಿಕಿತ್ಸಾ ವೆಚ್ಚವನ್ನು ಇಲಾಖೆ ಭರಿಸಲಿದೆ. ದೇಶದ ೧೭ ಇಎಸ್‌ಐಸಿ ಮೆಡಿಕಲ್ ಕಾಲೇಜುಗಳಲ್ಲಿ ಕಾರ್ಮಿಕರ ಮಕ್ಕಳಿಗೆ ೭೦೨ ಸೀಟುಗಳನ್ನು ಮೀಸಲಿರಿಸಲಾಗಿದೆ ಎಂದರು.

ಧ್ವನಿ - ಶೋಭಾ ಕರಂದ್ಲಾಜೆ

---

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ದೇಶದಾದ್ಯಂತ ಆರೋಗ್ಯ ಸೌಲಭ್ಯಗಳಲ್ಲಿ ಬೆಂಕಿಯ ಅಪಾಯಗಳನ್ನು ತಡೆಗಟ್ಟುವ ಮತ್ತು ತಗ್ಗಿಸುವ ಮಹತ್ವದ ಕುರಿತು ಜಾಗೃತಿ ಮೂಡಿಸಲು ನಾಳೆಯಿಂದ ಭಾರತದಾದ್ಯಂತ 'ಅಗ್ನಿ ಸುರಕ್ಷತಾ ಸಪ್ತಾಹ' ಆಚರಿಸಲಿದೆ.

ಕೇಂದ್ರ ಆರೋಗ್ಯ ಕಾರ್ಯದರ್ಶಿ ಪುಣ್ಯ ಸಲೀಲಾ ಶ್ರೀವಾಸ್ತವ ಅವರು ನಾಳೆ ನವದೆಹಲಿಯ ಕರ್ತವ್ಯ ಭವನದಲ್ಲಿ ಅಗ್ನಿ ಸುರಕ್ಷತಾ ಸಪ್ತಾಹಕ್ಕೆ ಚಾಲನೆ ನೀಡಲಿದ್ದಾರೆ ಮತ್ತು ಆರೋಗ್ಯ ಸೌಲಭ್ಯಗಳಲ್ಲಿ ಅಗ್ನಿ ಸುರಕ್ಷತೆಯ ಕುರಿತು ಪ್ರತಿಜ್ಞಾವಿಧಿ ಬೋಧಿಸಲಿದ್ದಾರೆ.

ವಿವಿಧ ಜಾಗೃತಿ ಅಭಿಯಾನಗಳು, ಅಣಕು ಅಭ್ಯಾಸಗಳು, ಅಗ್ನಿ ಸುರಕ್ಷತಾ ಪ್ರೋಟೋಕಾಲ್ ಗಳ ಪ್ರಸಾರ ಸೇರಿದಂತೆ ಹಲವು ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು.

___________

ಹೈದರಾಬಾದ್‌ನಲ್ಲಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ನೀಡಿದ ೧೬೫ ರನ್‌ಗಳ ಗುರಿ ಬೆನ್ನತ್ತಿದ ಕೊಲ್ಕತ್ತಾ ನೈಟ್‌ರೈಡರ್ಸ್ ತಂಡ ೧೮.೨ ಓವರ್‌ಗಳಲ್ಲಿಯೇ ೩ ವಿಕೆಟ್ ನಷ್ಟಕ್ಕೆ ೧೬೯ ರನ್ ಗಳಿಸಿ ಜಯ ಸಾಧಿಸಿದೆ.

ಅಹಮದಾಬಾದ್‌ನಲ್ಲಿ ನಡೆದಿರುವ ದಿನದ ಮತ್ತೊಂದು ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಎದುರು ಟಾಸ್ ಸೋತು ಮೊದಲು ಬ್ಯಾಟ್ ಮಾಡಿರುವ ಪಂಜಾಬ್ ಕಿಂಗ್ಸ್ ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಗುಜರಾತ್ ಟೈಟನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

___________

ಉಕ್ರೇನಿನ ಮಾರ್ಟಾ ಕೋಸ್ಟ್ಯುಕ್ ಮ್ಯಾಡ್ರಿಡ್ ಓಪನ್ ಟೆನಿಸ್ ೨೦೨೬ ಜಯಿಸಿದ್ದಾರೆ. ಇದು ಅವರ ವೃತ್ತಿಜೀವನದ ಅತಿದೊಡ್ಡ ಪ್ರಶಸ್ತಿಯಾಗಿದೆ.

೨೩ ವರ್ಷದ ಉಕ್ರೇನ್ ಆಟಗಾರ್ತಿ ನಿನ್ನೆ ನಡೆದ ಮಹಿಳೆಯರ ಸಿಂಗಲ್ಸ್ ಫೈನಲ್‌ನಲ್ಲಿ ವಿಶ್ವದ ೮ನೇ ಶ್ರೇಯಾಂಕಿತೆ ಮಿರ್ರಾ ಆಂಡ್ರೀವಾ ಅವರನ್ನು ೬-೩, ೭-೫ ಸೆಟ್‌ಗಳಿಂದ ಮಣಿಸಿದರು.

______ ಮುಕ್ತಾಯ ______